ಎಂ ವಿ ಸಿ ನಂ. 14/2022

ಪಿ ಡಬ್ಲ್ಯೂಃ 1

ದಿನಾಂಕ 06/02/2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲುಃ 3ನೇ ಎದುರುದಾರರ ಪರಃ ಶ್ರೀ ಹೆಚ್ ಎನ್ ಆರ್ ವಕೀಲರಿಂದಃ</u>

2 ಮತ್ತು 3ನೇ ಅರ್ಜಿದಾರರು ನನ್ನ ಮಕ್ಕಳಾಗಿರುತ್ತಾರೆ. ಅರ್ಜಿ ಸಲ್ಲಿಸುವ ಸಮಯಕ್ಕೆ 2ನೇ ಅರ್ಜಿದಾರರ ವಯಸ್ಸು ೨೮ ವರ್ಷ ಮತ್ತು 3ನೇ ಅರ್ಜಿದಾರರಿಗೆ 21 ವರ್ಷ ವಯಸ್ಸಾಗಿತ್ತು ಎಂದರೆ ಸರಿ. ಅಪಘಾತವನ್ನು ನಾನು ಕಣ್ಣಾರೆ ನೋಡಿರುವುದಿಲ್ಲ, ಆದರೆ ಅದರ ಬಗ್ಗೆ ಪ್ರತ್ಯಕ್ಷ ದರ್ಶಿಗಳಿಂದ ಕೇಳಿ ತಿಳಿದುಕೊಂಡಿರುತ್ತೇನೆ. ಅಪಘಾತದ ವಿಚಾರ ತಿಳಿದು ನಾನು ಕಡೂರಿನ ಸರ್ಕಾರಿ ಆಸ್ಪತ್ರೆಗೆ ಹೋಗಿರುತ್ತೇನೆ. ಅಪಘಾತವು ನನ್ನ ಗಂಡನ ತಪ್ಪಿನಿಂದಲೇ ಆಗಿರುತ್ತದೆ ಎಂದರೆ ಸರಿಯಲ್ಲ. ನನ್ನ ಗಂಡ ಆ ದಿನ ಮೊಫೆಡ್ ವಾಹನವನ್ನು ತಳ್ಳಿಕೊಂಡು ಹೋಗುತ್ತಿರಲಿಲ್ಲ, ಚಾಲನೆ ಮಾಡಿಕೊಂಡು ಹೋಗುತ್ತಿದ್ದರು ಎಂದರೆ ಸರಿಯಲ್ಲ. ದ್ವಿಚಕ್ರ ವಾಹನ ಚಾಲನೆ ಮಾಡಲು ನನ್ನ ಗಂಡನಿಗೆ ಚಾಲನಾ ಪರವಾನಿಗಿ ಇತ್ತು, ಅದನ್ನು ನ್ಯಾಯಾಲಯಕ್ಕೆ ಸಲ್ಲಿಸಲು ನನಗೆ ತೊಂದರೆ ಇರುವುದಿಲ್ಲ. ನನ್ನ ಗಂಡನನಿಗೆ ದ್ವಿಚಕ್ರ ವಾಹನ ಚಾಲನೆ ಮಾಡಲು ಚಾಲನಾ ಪರವಾನಿಗಿ ಮತ್ತು ವಿಮೆ ಇಲ್ಲದೆ ಇರುವುದರಿಂದ ನನ್ನ ಗಂಡ ವಾಹನವನ್ನು ಚಾಲನೆ ಮಾಡಿಕೊಂಡು ಅಪಘಾತ ಪಡಿಸಿದ್ದರೂ ಸಹ ಪರಿಹಾರ ಪಡೆಯುವ ಉದ್ದೇಶದಿಂದ ತಳ್ಳಿಕೊಂಡು ಹೋಗುತ್ತಿದ್ದರು ಎಂದು ಸುಳ್ಳು ದೂರನ್ನು ನೀಡಲಾಗಿದೆ ಎಂದರೆ ಸರಿಯಲ್ಲ. ನನ್ನ ಗಂಡನ ಚಿಕಿತ್ಸೆಗಾಗಿ ಮತ್ತು ಶವಸಂಸ್ಕಾರಕ್ಕಾಗಿ 3 ಲಕ್ಷ ರೂ ಖರ್ಚಾಗಿಲ್ಲ ಎಂದರೆ ಸರಿಯಲ್ಲ. 2ನೇ ಅರ್ಜಿದಾರರು ಕೂಲಿ ಕೆಲಸ ಮಾಡುತ್ತಾರೆ, 3ನೇ ಅರ್ಜಿದಾರರು ಗ್ಯಾರೇಜಿನಲ್ಲಿ ಕೆಲಸ ಮಾಡುತ್ತಾರೆ. ಅವರಿಬ್ಬರು

ಮದುವೆ ಮಾಡಿಕೊಂಡು ಬೇರೆ ಇದ್ದಾರೆ. ನನ್ನ ಗಂಡ ಮಾಸಿಕ 20 ಸಾವಿರ ರೂ ದುಡಿಯುತ್ತಿದ್ದ ಬಗ್ಗೆ ಯಾವುದೇ ದಾಖಲೆ ಹಾಜರುಪಡಿಸಿಲ್ಲ ಎಂದರೆ ಸರಿ. ನನ್ನ ಗಂಡ ಮಾಸಿಕ 20 ಸಾವಿರ ರೂ ಸಂಪಾದನೆ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ನಾನು ಬಿ ಪಿ ಎಲ್ ಕಾರ್ಡು ಹೊಂದಿದ್ದು, ಅದನ್ನು ನ್ಯಾಯಾಲಯಕ್ಕೆ ಹಾಜರುಪಡಿಸಬಹುದು. ನಮ್ಮ ಕುಟುಂಬಕ್ಕೆ ಬಿ ಪಿ ಎಲ್ ಪಡಿತರ ಚೀಟಿ ಇರುವುದರಿಂದ ನನ್ನ ಗಂಡನಿಗೆ ನಾನು ಹೇಳಿದಷ್ಟು ಆದಾಯ ಇರಲಿಲ್ಲ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನನ್ನ ಗಂಡ ನನ್ನನ್ನಲ್ಲದೇ ನನ್ನ ಇಬ್ಬರು ಮಕ್ಕಳನ್ನು ಸಹ ಸಾಕುತ್ತಿದ್ದರು ಎಂದು ನುಡಿಯುತ್ತಾರೆ. ಅಪಘಾತದ ಸಮಯದಲ್ಲಿ ನನ್ನ ಗಂಡನಿಗೆ 65 ವರ್ಷಕ್ಕಿಂತ ಹೆಚ್ಚು ವಯಸ್ಸಾಗಿತ್ತು ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು 55 ವರ್ಷ ವಯಸ್ಸಾಗಿತ್ತು ಎಂದು ನುಡಿಯುತ್ತಾರೆ. ನಾನಾಗಲಿ ನನ್ನ ಮಕ್ಕಳಾಗಲಿ ನನ್ನ ಗಂಡನ ಆದಾಯದ ಮೇಲೆ ಅವಲಂಬಿತರಾಗಿರಲಿಲ್ಲ ಎಂದರೆ ಸರಿಯಲ್ಲ. ನನ್ನ ಗಂಡನ ಸಾವಿನಿಂದ ನನಗೆ ಯಾವುದೇ ಆರ್ಥಿಕ ನಷ್ಟ ಉಂಟಾಗಿಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯುವ ಸಲುವಾಗಿ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತವನ್ನು ನೋಡಿರುವಂತಹ ಪ್ರತ್ಯಕ್ಷದರ್ಶಿಯನ್ನು ಸಾಕ್ಷ್ಯ ವಿಚಾರಣೆ ಮಾಡಲು ನನಗೆ ಯಾವುದೇ ತೊಂದರೆ ಇರುವುದಿಲ್ಲ.

ಮರುವಿಚಾರಣೆಃ ಇಲ್ಲ

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

ಓ ಹೇ ಕೇ ಸ ಇ ಎ ಒ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ, ಕಡೂರು.